ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ,
ಕ್ರಾಫರ್ಡ್ ಭವನ, ಮೈಸೂರು-570 005.

ವಿಷಯ: 2012–13ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ: ದಿನಾಂಕ 31–07–21012 ರಂದು ನಡೆದ ವಿಶ್ವವಿದ್ಯಾನಿಲಯದ ಅತಿಥಿ ಉಪನ್ಯಾಸಕರ ಆಯ್ಕೆ ಸಮಿತಿ ಸಭೆಯ ನಡಾವಳಿ.

--

**ಆದೇಶ ಸಂಖ್ಯೆ: ಇಟಿ7/162/2010–11(3) ದಿನಾಂಕ 08–08–2012**

ದಿನಾಂಕ 31–07–2012 ರಂದು ನಡೆದ ವಿಶ್ವವಿದ್ಯಾನಿಲಯದ ಅತಿಥಿ ಉಪನ್ಯಾಸಕರ ಆಯ್ಕೆ ಸಮಿತಿ ಸಭೆಯ ನಿರ್ಣಯ ಹಾಗೂ ಮಾನ್ಯ ಕುಲಪತಿಯವರ ಅನುಮೋದನೆಯ ಮೇರೆಗೆ, 2012–13ನೇ ಶೈಕ್ಷಣಿಕ ಸಾಲಿನಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ವಿಭಾಗಗಳಲ್ಲಿನ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಬೋಧನಾ ಕಾರ್ಯ ನಿರ್ವಹಿಸಲು ಈ ಕೆಳಗಿನಂತೆ ಅತಿಥಿ ಉಪನ್ಯಾಸಕರಾಗಿ ಆಹ್ವಾನಿಸಲಾಗಿದೆ.

| ಕ್ರ. ಸಂ. | ಅತಿಥಿ ಉಪನ್ಯಾಸಕರ ಹೆಸರು | ವಿಷಯ | ವಾರಕ್ಕೆ ಒಟ್ಟು ಬೋಧನಾ (ಥಿಯರಿ / ಪ್ರಾಕ್ಟಿಕಲ್) ಕಾರ್ಯ (ಗಂಟೆಗಳಲ್ಲಿ) * | ಸ್ನಾತಕೋತ್ತರ ವಿಭಾಗ | ಮಾಹೆಯಾನ ಸಂಭಾವನೆ ರೂ.ಗಳಲ್ಲಿ |
|---|---|---|---|---|---|
| 01. | ಡಾ.ಎಸ್.ರೇಣುಕ<br>#722, ಶ್ರೀ.ಮಹದೇಶ್ವರ ನಿಲಯ, ರಾಮಕೃಷ್ಣನಗರ ಐ ಬ್ಲಾಕ್,<br>ಮೈಸೂರು–570022 | ದಕ್ಷಿಣ ಭಾರತೀಯ ಅಧ್ಯಯನ | 16 | ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ, ಮಾನಸಗಂಗೋತ್ರಿ, ಮೈಸೂರು. | 22000–00 |

* ಬೋಧನಾ ವಿಷಯ, ಥಿಯರಿ / ಪ್ರಾಕ್ಟಿಕಲ್ ಕಾರ್ಯದ ಬಗ್ಗೆ ಸಂಬಂಧಿಸಿದ ವಿಭಾಗದ ಅಧ್ಯಕ್ಷರು ಹಂಚಿಕೆ ಮಾಡುವರು. ಎರಡು ಪ್ರಾಯೋಗಿಕ ಬೋಧನಾ ಕಾರ್ಯವು ಒಂದು ಥಿಯರಿ ಬೋಧನಾ ಕಾರ್ಯಕ್ಕೆ ಸಮಾನವಾಗಿರುತ್ತದೆ.

ಆಹ್ವಾನಿತ ಅತಿಥಿ ಉಪನ್ಯಾಸಕರು ಈ ಆದೇಶ ನೀಡಿದ 7 ದಿನಗಳೊಳಗೆ ಸಂಬಂಧಪಟ್ಟ ಸಂಸ್ಥೆಯ ನಿರ್ದೇಶಕರಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ ಈ ಆದೇಶವು ರದ್ದಾಗುತ್ತದೆ.

ಷರತ್ತುಗಳು:

ಅ. ಪ್ರತಿ ವಾರದಲ್ಲಿ 16 ಗಂಟೆಗಳ ಬೋಧನಾ ಕಾರ್ಯನಿರ್ವಹಿಸಲು ಆಹ್ವಾನಿತವಾಗಿರುವ ಅತಿಥಿ ಉಪನ್ಯಾಸಕರುಗಳು ಪ್ರತಿದಿನ ಅಧ್ಯಯನ ವಿಭಾಗದ ಕೆಲಸದ ಪೂರ್ಣಾವಧಿಯಲ್ಲಿ ಕಡ್ಡಾಯವಾಗಿ ಉಪಸ್ಥಿತರಿದ್ದು, ವಿದ್ಯಾರ್ಥಿಗಳ ಮಾರ್ಗದರ್ಶನಕ್ಕೆ ಲಭ್ಯವಿರಬೇಕು. ಇಂತಹ ಅತಿಥಿ ಉಪನ್ಯಾಸಕರು ಪ್ರತಿ ಮಾಹೆಯಲ್ಲಿ ಒಂದು ದಿವಸ ಸಾಂದರ್ಭಿಕ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ. ಹೀಗೆ ರಜೆ ಪಡೆದಾಗ ತಪ್ಪಿದ ತರಗತಿಗಳನ್ನು ಮುಂದಿನ ದಿನಗಳಲ್ಲಿ ಸರಿದೂಗಿಸುವುದು.

ಆ. ಹಂಚಿಕೆಯಾಗಿರುವ ಬೋಧನಾ ತರಗತಿಗಳನ್ನು ತೆಗೆದುಕೊಳ್ಳಲು ವಿಫಲರಾದಲ್ಲಿ, ಗೈರುಹಾಜರಾದ ದಿನದ ಸಂಭಾವನೆಯನ್ನು ಕಡಿತಗೊಳಿಸಲಾಗುವುದು.

ಆಹ್ವಾನಿತ ಅತಿಥಿ ಉಪನ್ಯಾಸಕರು ಕೆಲಸಕ್ಕೆ ವರದಿ ಮಾಡಿಕೊಳ್ಳುವಾಗ ಈ ಕೆಳಕಂಡಂತೆ ಮುಚ್ಚಳಿಕೆಯನ್ನು ನೀಡತಕ್ಕದ್ದು.

**ಮುಚ್ಚಳಿಕೆ**

1. ಈ ಮೂಲಕ ಪ್ರಮಾಣೀಕರಿಸುವುದೇನೆಂದರೆ, ವಿಶ್ವವಿದ್ಯಾನಿಲಯವು 2012–13ನೇ ಶೈಕ್ಷಣಿಕ ವರ್ಷಕ್ಕೆ ಅಥವಾ ಮುಂದಿನ ಆದೇಶದವರೆಗೆ, ಯಾವುದು ಮೊದಲು ಘಟಿಸುವುದೋ ಅಲ್ಲಿಯವರೆಗೆ ಬೋಧನಾ ಕಾರ್ಯವನ್ನು ನಿರ್ವಹಿಸಲು ನನ್ನನ್ನು ಆಹ್ವಾನಿಸಿರುವುದು ತಾತ್ಕಾಲಿಕವಾಗಿರುತ್ತದೆ ಎಂದು ತಿಳಿದಿರುತ್ತೇನೆ. ಜೊತೆಗೆ ವಿಶ್ವವಿದ್ಯಾನಿಲಯವು ಯಾವುದೇ ಮುನ್ಸೂಚನೆ ಇಲ್ಲದಂತೆ ಹಾಗೂ ಯಾವುದೇ ಕಾರಣ ನೀಡದೆ ನನಗೆ ನೀಡಿರುವ ಅತಿಥಿ ಉಪನ್ಯಾಸಕರ ಆಹ್ವಾನವನ್ನು ಹಿಂಪಡೆಯಬಹುದಾಗಿದೆ.
2. ನಾನು ಪೂರ್ಣಕಾಲಿಕ ಅತಿಥಿ ಉಪನ್ಯಾಸಕನಾಗಿ ಆಹ್ವಾನಿತನಾದ ಅಧ್ಯಯನ ವಿಭಾಗದ ಪೂರ್ಣಾವಧಿಯಲ್ಲಿ ಹಾಜರಿದ್ದು ಕಾರ್ಯನಿರ್ವಹಿಸುತ್ತೇನೆ.
3. ಮುಂದುವರಿಕೆಯಾಗಿ, ಮೈಸೂರು ವಿಶ್ವವಿದ್ಯಾನಿಲಯದ ಅತಿಥಿ ಉಪನ್ಯಾಸಕನ ಹೊರತಾಗಿ ನಾನು ಯಾವುದೇ ಖಾಸಗಿ / ಸರ್ಕಾರಿ / ವಿಶ್ವವಿದ್ಯಾನಿಲಯ ಸಂಸ್ಥೆಗಳಲ್ಲಿ ಬೋಧನಾ ಕಾರ್ಯವನ್ನು ನಿರ್ವಹಿಸುವುದಿಲ್ಲವೆಂದು ಈ ಮೂಲಕ ದೃಢೀಕರಿಸುತ್ತೇನೆ.

ಮೇಲಿನ ಎಲ್ಲಾ ಷರತ್ತುಗಳಿಗೆ ಬದ್ಧನಾಗಿ ತಾವು ನೀಡಿರುವ ಅತಿಥಿ ಉಪನ್ಯಾಸಕರ ಆಹ್ವಾನವನ್ನು ಒಪ್ಪಿಕೊಂಡಿರುತ್ತೇನೆ.

ಆದೇಶದ ಮೇರೆಗೆ,

**ಕುಲಸಚಿವರಿಂದ ಕರಡು ಅನುಮೋದಿಸಿದೆ.**

08/8/12

ಕುಲಸಚಿವ

ಇವರಿಗೆ:

1. ಸಂಬಂಧಪಟ್ಟ ಅತಿಥಿ ಉಪನ್ಯಾಸಕರುಗಳಿಗೆ – ನಿರ್ದೇಶಕರು ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ, ಮಾನಸಗಂಗೋತ್ರಿ, ಮೈಸೂರು–ಇವರ ಮುಖಾಂತರ
2. ನಿರ್ದೇಶಕರು, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ, ಮಾನಸಗಂಗೋತ್ರಿ, ಮೈಸೂರು.
3. ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಹಣಕಾಸು ಅಧಿಕಾರಿಯವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಸರ್ಕಾರಿ ಲೆಕ್ಕ ಪರಿಶೋಧಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಆಡಳಿತಾಧಿಕಾರಿಯವರು, ಮಾನಸಗಂಗೋತ್ರಿ, ಮೈಸೂರು.
7. ಉಪಕುಲಸಚಿವರು(ಸಾಮಾನ್ಯ)/ಸಹಾಯಕ ಕುಲಸಚಿವ/ಅಧೀಕ್ಷಕರು (ಸಿಬ್ಬಂದಿ), ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ,ಮೈಸೂರು.
8. ಕುಲಪತಿಯವರ ಆಪ್ತ ಕಾರ್ಯದರ್ಶಿಯವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ಕುಲಪತಿ/ಕುಲಸಚಿವ/ಹಣಕಾಸು ಅಧಿಕಾರಿ/ಕುಲಸಚಿವ(ಪರೀಕ್ಷಾಂಗ) ಅವರುಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
10. ಕಛೇರಿ ಪ್ರತಿ – C:\Users\Acer\Desktop\guest gaculty pg appointment order.d